# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

**ಸಿ.ಸಿ. ಸಂಖ್ಯೆಃ 1947/2023**

**ಪಿರ್ಯಾದಿ** ಃ ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ, ಮೂಡಿಗೆರೆ.

**ವಿರುದ್ಧ**

**ಆರೋಪಿ** ಃ ಹೇಮಂತ್ ಕುಮಾರ್.ಎಸ್.ಪಿ ಬಿನ್ ಪರಮೇಶಪ್ಪ,
ವಯಸ್ಸು ಸುಮಾರು 38 ವರ್ಷ,
ವಾಸಃ ಶಿವನಿ ಗ್ರಾಮ, ಅಜ್ಜಂಪುರ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

## ಆಪಾದನೆಯ ಸಾರಾಂಶ

ನಾನು ಶ್ರೀ ಸಚಿನ್.ಡಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

**1.** ದಿನಾಂಕಃ 12.08.2023 ರಂದು ಮಧ್ಯಾಹ್ನ 1.45 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಮುತ್ತಿಗೆಪುರ ಗ್ರಾಮದ ಸಮೀಪ ಮುದ್ರೆಮನೆ ಕಾಫೀ ಕ್ಯೂರಿಂಗ್ ಹತ್ತಿರ ಮೂಡಿಗೆರೆ ಹ್ಯಾಂಡ್ ಪೋಸ್ಟ್ ಕಡೆಯಿಂದ ಸಕಲೇಶಪುರ ಕಡೆಗೆ ಹೋಗುವ ಟಾರು ರಸ್ತೆಯಲ್ಲಿ ಚಾಸಾ1 ರವರ ತಮ್ಮ ವಾಹನ ನೋಂದಣಿ ಸಂಖ್ಯೆಃಕೆಎ-05-ಎನ್.ಇ-9872 ನೇ ಮಾರುತಿ ಸ್ವಿಫ್ಟ್ ಕಾರಿನ ಮುಂಭಾಗದ ಡ್ರೈವರ್ ಸೀಟ್ ಪಕ್ಕದಲ್ಲಿ ತನ್ನ ಮಗನಾದ 13 ವರ್ಷ ಪ್ರಾಯದ ನಿರಂಜನ್ ಹಿರೇಮಠ್ ರವರನ್ನು ಹಾಗೂ ಹಿಂಭಾಗದ ಸೀಟಿನಲ್ಲಿ ತನ್ನ ಹೆಂಡತಿಯಾದ ಪೂಜಾ ಹಿರೇಮಠ್ ರವರನ್ನು ಕೂರಿಸಿಕೊಂಡು ಹೋಗುತ್ತಿರುವಾಗ, ಸಕಲೇಶಪುರಕಡೆಯಿಂದ ಮೂಡಿಗೆರೆ ಹ್ಯಾಂಡ್ ಪೋಸ್ಟ್ ಕಡೆಗೆ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆಃಕೆಎ-40-ಎಫ್-0506 ನೇ ಕೆ.ಎಸ್.ಆರ್.ಟಿ.ಸಿ ಬಸ್ ಅನ್ನು ತುಂಬಾ ಅಜಾಗರೂಕತೆಯಿಂದ ಮತ್ತು ನಿರ್ಲಕ್ಷತನದಿಂದ ಚಾಲನೆ ಮಾಡಿಕೊಂಡು ಬಂದಿರುತ್ತೀರಿ. ಈ ರೀತ್ಯಾ

ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

2. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ನಿಮ್ಮ ವಾಹನವನ್ನು ತುಂಬಾ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬರುವಾಗ ಸದರಿ ಬಸ್ಸಿನ ಮುಂದೆ ಮೂಡಿಗೆರೆ ಹ್ಯಾಂಡ್ ಪೋಸ್ಟ್ ಕಡೆಗೆ ಹೋಗುತ್ತಿದ ಚಾಸಾ13 ಮತ್ತು 14 ರವರ ಮೋಟಾರ್ ಸೈಕಲ್ ಅನ್ನು ಓವರ್ ಟೇಕ್ ಮಾಡಿ ಮುಂದೆ ಹೋಗಲು ಬಸ್ಸನ್ನು ರಸ್ತೆಯ ತೀರಾ ಬಲಭಾಗಕ್ಕೆ ತೆಗೆದುಕೊಂಡು ಚಾಸಾ1 ರವರ ಚಾಲನೆ ಮಾಡಿಕೊಂಡು ಬರುತ್ತಿದ್ದ ಕಾರಿನ ಕಡೆಗೆ ಚಾಲನೆ ಮಾಡಿಕೊಂಡು ಹೋಗಿದ್ದರಿಂದ ಚಾಸಾ1 ರವರ ತನ್ನ ಎಡಭಾಗಕ್ಕೆ ಕಾರು ಚಾಲನೆ ಮಾಡಲು ಜಾಗವಿಲ್ಲದ ಕಾರಣ ಅಪಘಾತ ತಪ್ಪಿಸುವ ಸಲುವಾಗಿ ಕಾರನ್ನು ರಸ್ತೆಯ ಬಲಭಾಗಕ್ಕೆ ತೆಗೆದುಕೊಂಡಾಗ ಆರೋಪಿಯಾದ ನೀವು ಸದರಿ ಬಸ್ಸನ್ನು ಏಕಾಏಕೀ ರಸ್ತೆಯ ಎಡಭಾಗಕ್ಕೆ ಚಾಲನೆ ಮಾಡಿಕೊಂಡು ಹೋಗಿ ಚಾಸಾ1 ರವರ ಕಾರಿನ ಮುಂಭಾಗಕ್ಕೆ ಡಿಕ್ಕಿಪಡಿಸಿದ ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ಜಖಂಗೊಂಡು ಚಾಸಾ1 ರವರ ತಲೆಗೆ, ಮೈ-ಕೈ-ಕಾಲುಗಳಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 337 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

3. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ನಿಮ್ಮ ವಾಹನವನ್ನು ತುಂಬಾ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬರುವಾಗ, ನೀವು ಚಲಾಯಿಸುತ್ತಿದ್ದ ಬಸ್ಸನ್ನು ಏಕಾಏಕೀ ರಸ್ತೆಯ ಎಡಭಾಗಕ್ಕೆ ಚಾಲನೆ ಮಾಡಿಕೊಂಡು ಹೋಗಿ ಚಾಸಾ1 ರವರ ಕಾರಿನ ಮುಂಭಾಗಕ್ಕೆ ಡಿಕ್ಕಿಪಡಿಸಿದ ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ಜಖಂಗೊಂಡು ಚಾಸಾ1 ರವರ ತಲೆಗೆ, ಮೈ-ಕೈ-ಕಾಲುಗಳಿಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 338 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

4. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ತುಂಬಾ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು

ಕಾರಿಗೆ ಡಿಕ್ಕಿಪಡಿಸಿದ ಪರಿಣಾಮ, ಕಾರಿನಲ್ಲಿ ಕುಳಿತಿದ್ದ ಚಾಸಾ1 ರವರ ಮಗನಾದ 13 ವರ್ಷ ಪ್ರಾಯದ ನಿರಂಜನ್ ಹಿರೇಮಠ್ ರವರಿಗೆ ಹಾಗೂ ಅವರ ಹೆಂಡತಿಯಾದ ಪೂಜಾ ಹಿರೇಮಠ್ ರವರ ತಲೆಗೆ ಮತ್ತು ಮೈ-ಕೈ-ಕಾಲುಗಳಿಗೆ ತೀವ್ರ ಸ್ವರೂಪದ ರಕ್ತಗಾಯಗಳಾಗಿ ಅಪಘಾದಿಂದಾದ ಗಾಯಗಳಿಂದ ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 304(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ*?*

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ*?* ಅದು ನಿಮಗೆ ಅರ್ಥವಾಯಿತೇ*?*

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ*?*

ಆರೋಪಿಯ ಉತ್ತರಃ

*(*ದಿನಾಂಕ 23.02.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**Sd**/-

ಮೂಡಿಗೆರೆ
ದಿನಾಂಕಃ 23.02.2024

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.